ಸಿಸಿ ನಂ. 479/2018 ಪಿಡಬ್ಲೂ :1

ದಿನಾಂಕಃ 19-12-2023 ರಂದು ಸಾಕ್ಷಿಯನ್ನು ಪುನಃ ಕರೆಸಿ ಪ್ರಮಾಣೀಕರಿಸಲಾಯಿತು.

**ದಂಡ ಪ್ರಕ್ರಿಯೇ ಸಂಹಿತೆ ಕಲಂ 299 ರ ಅಡಿಯಲ್ಲಿ ಮುಖ್ಯ ವಿಚಾರಣೆಃ ಪಿರ್ಯಾದುದಾರರ ಪರವಾಗಿಃ ಶ್ರೀ ಎಸ್ ಜೆ ಎನ್ ವಕೀಲರಿಂದಃ**

ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತದೆ.

2. ಫಿರ್ಯಾದುದಾರ ಸಂಸ್ಥೆಯವರು ನನಗೆ ನೀಡಿರುವ ಜಿಪಿಎ ಪತ್ರದ ಯಥಾ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-1 ಎಂದು, ಆರೋಪಿಯು ನೀಡಿದ ಚೆಕ್ ಹಾಜರು ಪಡಿಸಿದ್ದು ಅದನ್ನು ನಿಪಿ-2 ಎಂದು ಗುರುತಿಸಲಾಯಿತು. ನಿಪಿ-2 ರಲ್ಲಿರುವ ಸಹಿ ಆರೋಪಿಯ ಸಹಿಯಾಗಿರುತ್ತದೆ . ಸದರಿ ಸಹಿಯನ್ನು ನಿಪಿ -2 ಎ ಎಂದು ಗುರುತಿಸಲಾಯಿತು . ಬ್ಯಾಂಕನವರು ಕೊಟ್ಟಿರುವ ಎರಡು ಮೆಮೊಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ನಿಪಿ -3 ಮತ್ತು 4 ಎಂದು ಗುರುತಿಸಲಾಯಿತು. ನಾವು ನಮ್ಮ ವಕೀಲರ ಮುಖಾಂತರ ಆರೋಪಿಗೆ ನೀಡಿದ ನೋಟಿಸಿನ ಕಚೇರಿ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-5 ಎಂದು, ಅಂಚೆ ರಸೀದಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-6 ಎಂದು ಗುರುತಿಸಲಾಯಿತು. ಸದರಿ ನೋಟಿಸನ್ನು ಆರೋಪಿಯು ಸ್ವೀಕರಿಸದ ಕಾರಣ ವಾಪಸ್ಸು ಬಂದಿದ್ದು ಅದನ್ನು ಅಂಚೆ ಲಕೋಟೆ ಸಮೇತವಾಗಿ ಹಾಜರು ಪಡಿಸಿರುತ್ತೇವೆ. ಸದರಿ ಅಂಚೆ ಲಕೋಟೆಯನ್ನು ತೆರೆದ ನ್ಯಾಯಾಲಯದಲ್ಲಿ ತೆರೆದು ನೋಡಲಾಯಿತು . ಸದರಿ ಅಂಚೆ ಲಕೋಟೆಯನ್ನು ನಿಪಿ -7 ಎಂದು, ಅದರ ಒಳಗೆ ಇದ್ದ ನೋಟಿಸನ್ನು ನಿಪಿ-7(ಎ) ಎಂದು ಗುರುತಿಸಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ. ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಧಾನ ಪ್ರ.ದ.ನ್ಯಾದಂ., ಕುಮಟಾ.